# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಸ.ನಿ(ನ.ಯೋ)/ಬೊ.ವ/ಎಲ್.ಪಿ/0917/2014-15.

ಸಹಾಯಕ ನಿರ್ದೇಶಕರು (ನಗರ ಯೋಜನೆ)
ಬೇಗೂರು ರಸ್ತೆ, ಬೊಮ್ಮನಹಳ್ಳಿ,
ಬೆಂಗಳೂರು-560 068.
ದಿನಾಂಕ: 31-03-2016.

ಅನುಸೂಚಿ- VII
(ಉಪವಿಧಿ ಸಂಖ್ಯೆ: 5.3)

**ಪ್ರಾರಂಭಿಕ ಪ್ರಮಾಣ ಪತ್ರ**

ವಿಷಯ:- ಪರವಾನಗಿ ಸಂಖ್ಯೆ: ಎಲ್.ಪಿ.0917/2014-15, ದಿನಾಂಕ: 26-05-2015 ರಂದು ಪರವಾನಗಿ ಪಡೆದಿರುವ ವಸತಿ ಸಮುಚ್ಚಯ ಕಟ್ಟಡದ ನಿರ್ಮಾಣವನ್ನು ಪ್ರಾರಂಭಿಸಲು ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

ಉಲ್ಲೇಖ:- 1. ಪ್ರಾರಂಭಿಕ ಪ್ರಮಾಣ ಪತ್ರಕ್ಕಾಗಿ ಮನವಿಯನ್ನು ಈ ಕಛೇರಿಯಲ್ಲಿ ಸ್ವೀಕರಿಸಿರುವ ದಿನಾಂಕ: 21-03-2016.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅನುಮೋದನೆಯ ದಿನಾಂಕ: 30-03-2016.

*****

ವಾರ್ಡ್‌ಸಂಖ್ಯೆ 192 ರಲ್ಲಿನ ಸ್ವತ್ತಿನ ಸಂಖ್ಯೆ: 22/115/1, 116/1 & 116/1/3, ಕಮ್ಮನಹಳ್ಳಿ ಗ್ರಾಮ ಈ ಸ್ವತ್ತನ್ನು ದಿನಾಂಕ: 29-03-2016 ರಂದು ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ ವಲಯ) ರವರೊಂದಿಗೆ ಪರಿವೀಕ್ಷಣೆ ಮಾಡಲಾಯಿತು ಮತ್ತು ಈ ಸ್ವತ್ತಿನಲ್ಲಿ ನಿರ್ಮಿಸಿರುವ ಆರ್.ಸಿ.ಸಿ ತಳಪಾಯ ಸ್ಥಂಭಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಕಛೇರಿ ಎಲ್.ಪಿ.ಸಂಖ್ಯೆ: 0917/2014-15, ದಿನಾಂಕ: 26-05-2015 ರಲ್ಲಿ ಪರವಾನಿಗೆ ನೀಡಿರುವ ಕಟ್ಟಡ ನಕ್ಷೆಯ ಪ್ರಕಾರ ಪರಿಶೀಲಿಸಲಾಗಿ, ಸ್ಥಳದಲ್ಲಿನ ನಡುಜಾಗಗಳು ಮಂಜೂರಾತಿ ನೀಡಿರುವ ನಕ್ಷೆಯ ಪ್ರಕಾರ ಇರುವುದು ಕಂಡುಬಂದಿದೆ. ಆದ್ದರಿಂದ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಕಾಮಗಾರಿಯನ್ನು ಮುಂದುವರಿಸಲು ಈ ಮೂಲಕ ಪ್ರಾರಂಭಿಕ ಪ್ರಮಾಣ ಪತ್ರ ನೀಡಲಾಗಿದೆ.

1. ಯಾವುದೇ ಬದಲಾವಣೆಗಳನ್ನಾಗಲೀ, ಮಾರ್ಪಾಡುಗಳನ್ನಾಗಲೀ ಅಥವಾ ಉಲ್ಲಂಘನೆಗಳನ್ನಾಗಲೀ ಮಾಡದೇ ಕಟ್ಟುನಿಟ್ಟಾಗಿ ಮಂಜೂರಾತಿ ನೀಡಿರುವ ನಕ್ಷೆಯ ಮತ್ತು ಕಟ್ಟಡ ಉಪವಿಧಿಗಳ ಪ್ರಕಾರವೇ ಕಾಮಗಾರಿಯನ್ನು ಕೈಗೊಳ್ಳತಕ್ಕದ್ದು.
2. ಕಾಮಗಾರಿಯು, ಅಡಿಪಾಯದ ಅಥವಾ ಸ್ಥಂಭಗಳ ಆಧಾರ ಅಥವಾ ಸ್ಥಂಭಗಳ ಸ್ಥಿರೀಕರಣ ಕಾರ್ಯವು ಪೂರ್ಣಗೊಂಡ ಹಂತವನ್ನು ತಲುಪಿದಾಗ ನಿರ್ಮಾಣವನ್ನು ಮಂಜೂರಾತಿ ನೀಡಿರುವ ನಕ್ಷೆಯ ಮತ್ತು ಕಟ್ಟಡದ ಉಪವಿಧಿಗಳ ಪ್ರಕಾರ ಕೈಗೊಂಡಿರುವ ಬಗ್ಗೆ ಕಾಮಗಾರಿಯನ್ನು ಪರಿವೀಕ್ಷಣೆ ಮತ್ತು ಶೋಧನೆ ಮಾಡಲು ನೆರವು ನೀಡುವ ದೃಷ್ಟಿಯಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಂದೇಶವನ್ನು ಕಳುಹಿಸತಕ್ಕದ್ದು.
3. ಸದರಿ ಸ್ವತ್ತಿನ ಮೇಲೆ ಯಾವುದೇ ನ್ಯಾಯಾಲಯದಲ್ಲಿ ಅಥವಾ ವ್ಯಕ್ತಿಗಳಿಂದ ತಂಟೆ ತಕರಾರು ಬಂದಲ್ಲಿ ನೀಡಲಾಗಿರುವ ಪ್ರಾರಂಭಿಕ ಪ್ರಮಾಣ ಪತ್ರವನ್ನು ಯಾವುದೇ ಮುನ್ಸೂಚನೆ ಇಲ್ಲದೆ ಏಕ ಪಕ್ಷೀಯವಾಗಿ ವಾಪಸ್ಸು ಪಡೆಯುವ ಷರತ್ತಿಗೊಳಪಟ್ಟಿದೆ.

ಪ್ರಾರಂಭಿಕ ಪ್ರಮಾಣ ಪತ್ರಕ್ಕಾಗಿ ರೂ. 1,55,000/- ಗಳನ್ನು ಡಿ.ಡಿ ಸಂಖ್ಯೆ: 251794 ರಲ್ಲಿ ದಿನಾಂಕ: 17-03-2016 ರನ್ವಯ ದಿನಾಂಕ: 29-03-2016 ರಂದು ಬಿಬಿಎಂಪಿ ಬೊಕ್ಕಸಕ್ಕೆ ಪಾವತಿಸಲಾಗಿರುತ್ತದೆ.

ತಮ್ಮ ವಿಶ್ವಾಸಿ,
31/3/2016.

ಸಹಾಯಕ ನಿರ್ದೇಶಕರು (ನಗರ ಯೋಜನೆ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಬೊಮ್ಮನಹಳ್ಳಿ ವಲಯ
31/3

**ರವರಿಗೆ :**

ಶ್ರೀಮತಿ. ತಲ್ಲುರಿ.ಎನ್.ಪ್ರಿಯಾ ರವರ ಪರವಾಗಿ
ಮೆ.ಅರ್ನ ಶೆಲ್ಟರ್ಸ್
ನಂ.1549, 2ನೇ ಮಹಡಿ, 5 ನೇ ಮೈನ್,
3ನೇ ಘಟ್ಟ, ಜೆ.ಪಿ.ನಗರ
ಬೆಂಗಳೂರು-560 078.